**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ.,**
**ನ್ಯಾಯಾಲಯ, ಶ್ರೀರಂಗಪಟ್ಟಣ.**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆ : 49/2024**

**ಚಾ.ಸಾ. :-2**
**ಪ್ರಾ.ಸಾ. :-3**

| | |
|---|---|
| ಹೆಸರು | : ಶಂಕರ್.ವಿ.ಎನ್ |
| ತಂದೆಯ ಹೆಸರು | : ಲೇಟ್ ನಿಂಗೇಗೌಡ |
| ವಯಸ್ಸು | : 44 ವರ್ಷ |
| ಉದ್ಯೋಗ | : ವ್ಯವಸಾಯ |
| ವಾಸಸ್ಥಳ | : ವಡ್ಡರಹಳ್ಳಿ ಗ್ರಾಮ |

**ಪ್ರಮಾಣೀಕರಿಸಲಾದ ದಿನಾಂಕಃ- 02.03.2026.**

**ಮುಖ್ಯ ವಿಚಾರಣೆ : ಮಾನ್ಯ ಸ.ಸ.ಅ.ರವರಿಂದ :**

ಮೃತ ಕಾಳೇಗೌಡರು ಹಾಗೂ ಆರೋಪಿ ಪರಿಚಯವಿಲ್ಲ. ಅಪಘಾತವನ್ನು ನಾನು ನೇರವಾಗಿ ನೋಡಿರುವುದಿಲ್ಲ. ಅಪಘಾತವು ಹೇಗೆ, ಯಾವ ರೀತಿ ಹಾಗೂ ಯಾರ ನಿರ್ಲಕ್ಷ್ಯತನದಿಂದ ಉಂಟಾಗಿರುತ್ತದೆ ಎಂಬುದು ನನಗೆ ಗೊತ್ತಿಲ್ಲ. ನಾನು ಪೊಲೀಸರಿಗೆ ಯಾವುದೇ ಹೇಳಿಕೆಯನ್ನು ಕೊಟ್ಟಿಲ್ಲ.

(ಈ ಹಂತದಲ್ಲಿ ಸ.ಸ.ಅ.ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸುವಂತೆ ಕೋರಿಕೊಂಡ ಮೇರೆಗೆ ದಾಖಲೆಗಳನ್ನು ಪರಿಶೀಲಿಸಿ, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅವಕಾಶ ನೀಡಲಾಯಿತು.)

**<u>ಪಾಟೀ ಸವಾಲು : ಮಾನ್ಯ ಸ.ಸ.ಅ.ರವರಿಂದ :</u>**

ದಿನಾಂಕಃ 21.01.2024 ರಂದು ನಾನು ಮತ್ತು ಚಾ.ಸಾ-1 ರವರು ಆರತಿ ಉಕ್ಕಡದ ಗೇಟ್ ಬಳಿ ಟೀ ಕುಡಿಯುತ್ತಾ ನಿಂತಿದ್ದಾಗ ನಮ್ಮ ಗ್ರಾಮದವರೇ ಆದ ಕಾಳೇಗೌಡರು ದ್ವಿಚಕ್ರ ವಾಹನದಲ್ಲಿ ಬಂದಿದ್ದು, ಆ ಸಮಯದಲ್ಲಿ ನ್ಯಾಯಾಲಯದ ಮುಂದಿರುವ ಆರೋಪಿಯು ಮ್ಯಾಕ್ಸಿ ಕ್ಯಾಬನ್ನು ಅತಿವೇಗ ಹಾಗೂ ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ಕಾಳೇಗೌಡರ ದ್ವಿಚಕ್ರ ವಾಹನಕ್ಕೆ ಹಿಂಬದಿಯಿಂದ ಡಿಕ್ಕಿಪಡಿಸಿರುತ್ತಾರೆಂದರೆ ಸುಳ್ಳು. ಸದರಿ ಅಪಘಾತವನ್ನು ನಾನು ನೇರವಾಗಿ ನೋಡಿರುತ್ತೇನೆಂದು ಹೇಳಿಕೆ ಕೊಟ್ಟಿರುತ್ತೇನೆ ಎಂದರೆ ಸರಿಯಲ್ಲ. ಗಾಯಾಳುವನ್ನು ನಾವು ಆಸ್ಪತ್ರೆಗೆ ಕಳುಹಿಸಿಕೊಟ್ಟಿರುತ್ತೇವೆ ಎಂದರೆ ಸರಿಯಲ್ಲ. ಆರೋಪಿ ಸ್ಥಳದಿಂದ ಓಡಿ ಹೋಗಿದ್ದು ನಂತರದಲ್ಲಿ ಠಾಣೆಯಲ್ಲಿ ಆತನನ್ನು ನೋಡಿ ಗುರುತಿಸಿರುತ್ತೇನೆ ಎಂದರೆ ಸರಿಯಲ್ಲ.

ಸಾಕ್ಷಿಯು ಪೊಲೀಸರ ಮುಂದೆ ನೀಡಿದ ಸಂಪೂರ್ಣ ಹೇಳಿಕೆಯನ್ನು ಸಾಕ್ಷಿಯವರಿಗೆ ಓದಿ ಹೇಳಲಾಗಿ ಸಾಕ್ಷಿಯು ಸದರಿ ಹೇಳಿಕೆಯನ್ನು ಪೊಲೀಸರಿಗೆ ನೀಡಿರುವುದಿಲ್ಲ ಎಂದು ನಿರಾಕರಿಸಿದ ಮೇರೆಗೆ ಹೇಳಿಕೆಯನ್ನು ನಿಪಿ-8 ಎಂದು ಗುರುತಿಸಲಾಯಿತು. ಆರೋಪಿಗೆ ಸಹಾಯ ಮಾಡಲು ನಾನು ಸುಳ್ಳು ಸಾಕ್ಷ್ಯ ನುಡಿಯುುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು:</u>** ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

**ಪ್ರಧಾನ ಹಿರಿಯ ಸಿಜೆ ಮತ್ತು**
**ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ.**

**ಸಾಕ್ಷಿದಾರರ ಸಹಿ.**